ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ಸಂಖ್ಯೆ : ವಾಇ : ಉ ನಿ : ಸುಮಪ : 2015–16 : ಆಗಸ್ಟ್ 18, 2015

# ರಾಷ್ಟ್ರಪತಿ ಪ್ರಣಬ್ ಮುಖರ್ಜಿ ಅವರ ಪತ್ನಿ ಸುವ್ರಾ ಮುಖರ್ಜಿ ಅವರ ನಿಧನಕ್ಕೆ ಮುಖ್ಯಮಂತ್ರಿ ಸಂತಾಪ

**ಬೆಂಗಳೂರು, ಆಗಸ್ಟ್ 18:**

ರಾಷ್ಟ್ರಪತಿ ಶ್ರೀ ಪ್ರಣಬ್ ಮುಖರ್ಜಿ ಅವರ ಪತ್ನಿ ಶ್ರೀಮತಿ ಸುವ್ರಾ ಮುಖರ್ಜಿ ಅವರ ನಿಧನಕ್ಕೆ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

ತಮ್ಮ ಧರ್ಮಪತ್ನಿ ಶ್ರೀಮತಿ ಸುವ್ರಾ ಮುಖರ್ಜಿ ಅವರ ನಿಧನವು ನನ್ನಲ್ಲಿ ಅತೀವ ನೋವು ಹಾಗೂ ಆಘಾತವನ್ನು ಉಂಟು ಮಾಡಿದೆ. ಅರ್ಧ ಶತಮಾನಕ್ಕೂ ಹೆಚ್ಚು ಕಾಲ ಜೀವನದ ಒಂದು ಭಾಗವಾಗಿ ಹಾಗೂ ಬದುಕಿನ ಯಶೋಗಾಥೆಯಲ್ಲಿ ಪ್ರಧಾನ ಪಾತ್ರವಹಿಸಿದ್ದ ಜೀವನ ಸಂಗಾತಿ ಕಣ್ಮರೆಯಾಗುವುದನ್ನು ಊಹಿಸುವುದೂ ಅಸಾಧ್ಯ. ತಮಗೆ ಸಾಂತ್ವನ ಹೇಳಲು ನನ್ನಲ್ಲಿ ಮಾತುಗಳಿಲ್ಲ. ಆದರೆ, ತಮ್ಮ ದುಃಖದಲ್ಲಿ ನಾನು ಭಾಗಿಯಾಗಿದ್ದೇನೆ ಎಂದು ಶ್ರೀ ಸಿದ್ದರಾಮಯ್ಯ ಅವರು ಹೇಳಿದ್ದಾರೆ.

ಶ್ರೀಮತಿ ಸುವ್ರಾ ಮುಖರ್ಜಿ ಅವರ ಆತ್ಮಕ್ಕೆ ಶಾಂತಿ ದೊರೆಯಲಿ ಹಾಗೂ ಅವರ ಅಗಲಿಕೆಯಿಂದ ಉಂಟಾದ ದುಃಖವನ್ನು ತಮಗೂ ಹಾಗೂ ತಮ್ಮ ಕುಟುಂಬಕ್ಕೂ ಭರಿಸುವ ಶಕ್ತಿಯನ್ನು ಕರುಣಿಸಲಿ ಎಂದು ಭಗವಂತನಲ್ಲಿ ಪ್ರಾರ್ಥಿಸುತ್ತೇನೆ ಎಂದು ಮುಖ್ಯಮಂತ್ರಿ ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ.

**********

ಡಿ ಪಿ ಎಂ